# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್–145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:09/08/2021 ರಂದು ಸೋಮವಾರ ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು Zoom Application Link ಮೂಲಕ ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಅಂತರ್ಜಾಲದ ಲಿಂಕ್ ಮುಖಾಂತರ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರಾದ ಸನ್ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ರವರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಸಹಾಯಕ ಅಭಿಯಂತರರು, ವಾರ್ಡ್–145.
3. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–145.
4. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–145
5. ಸಹಾಯಕ ಕಂದಾಯ ಅಧಿಕಾರಿ, ಹೊಂಬೇಗೌಡನಗರ ಬಿಬಿಎಂಪಿ.
6. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆಯ ಅಧಿಕಾರಿಗಳು ಕಾನೂನು ಮತ್ತು ಸುವ್ಯವಸ್ಥೆ ವಾರ್ಡ್ 145.
2. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆಯ ಅಧಿಕಾರಿಗಳು ಸಂಚಾರ, ವಾರ್ಡ್ 145.
3. ಆಡುಗೋಡಿ ಪೊಲೀಸ್ ಠಾಣೆಯ ಅಧಿಕಾರಿಗಳು ಕಾನೂನು ಮತ್ತು ಸುವ್ಯವಸ್ಥೆ ವಾರ್ಡ್ 145.
4. ವಿದ್ಯುತ್ ವಿಭಾಗ (ಬಿಬಿಎಂಪಿ) ಅಧಿಕಾರಿಗಳು ವಾರ್ಡ್ 145.
5. ಅರಣ್ಯ ಇಲಾಖೆ, ಬಿಬಿಎಂಪಿ ಅಧಿಕಾರಿಗಳು ವಾರ್ಡ್ 145.
6. ಬೆಸ್ಕಾಂ ಇಲಾಖೆ, ಅಧಿಕಾರಿಗಳು ವಾರ್ಡ್ 145.
7. ತೋಟಗಾರಿಕೆ ಇಲಾಖೆ, ಬಿಬಿಎಂಪಿ ಅಧಿಕಾರಿಗಳು ವಾರ್ಡ್ 145.



Scanned with CamScanner

*********

1. ಶ್ರೀ. ಬಾಲಾಜಿ ರವರು ಮಾತನಾಡಿ, ವಿಲ್ಸನ್‌ಗಾರ್ಡನ್ ಪ್ರದೇಶದಲ್ಲಿ ಒಣಗಿರುವ ಮರದ ಭಾಗಗಳನ್ನು ತೆರವುಗೊಳಿಸಲು ಸೂಚಿಸಿದರು, ಸದರಿ ವಿಷಯವನ್ನು ಈಗಾಗಲೇ ಅನೇಕ ಭಾರಿ ಅರಣ್ಯ ವಿಭಾಗಕ್ಕೆ ತಿಳಿಸಲಾಗಿರುತ್ತದೆ, ಈ ಸಭೆಗೆ ಅರಣ್ಯ ವಿಭಾಗದಿಂದ ಯಾವುದೇ ಅಧಿಕಾರಿ ಹಾಜರಾಗದ ಕಾರಣ ಮತ್ತೊಮ್ಮೆ ಸದರಿ ವಿಷಯವನ್ನು ಅರಣ್ಯ ವಿಭಾಗದ ಗಮನಕ್ಕೆ ತಂದು ತೆರವುಗೊಳಿಸಲಾಗುವುದೆಂದು ಸಭೆಗೆ ಅಧ್ಯಕ್ಷರು ತಿಳಿಸಿದರು.

2. ವಾರ್ಡ್‌ನಲ್ಲಿ ನಡೆಯುತ್ತಿರುವ ಕೋವಿಡ್ ವ್ಯಾಕ್ಸಿನ್ ಸ್ಥಳ ತುಂಬಾ ಕಿರಿದಾಗಿದ್ದು, ಸೂಕ್ತ ಸ್ಥಳ ಬದಲಾವಣೆಯನ್ನು ಸಾರ್ವಜನಿಕರು ಕೋರಿದರು. ಸಂಬಂಧಿಸಿದಂತೆ ಈಗಾಗಲೇ ಸ್ಥಳ ಬದಲಾವಣೆಗೆ ಪರಿಶೀಲಿಸುತ್ತಿದ್ದು, ಶೀಘ್ರದಲ್ಲೇ ಸ್ಥಳ ಬದಲಾವಣೆ ಮಾಡಲಾಗುವುದೆಂದು ಅಧ್ಯಕ್ಷರು ಸಭೆಗೆ ತಿಳಿಸಿದರು.

3. ಹರಿಲಕ್ಷ್ಮೀ ಥಿಯೇಟರ್ ಸುತ್ತಲಿನ ಪ್ರದೇಶದಲ್ಲಿ ಅನಧಿಕೃತ ಗಾರ್ಬೇಜ್ ತಂದು ಹಾಕುತ್ತಿದ್ದು, ಸ್ಥಳೀಯ ನಿವಾಸಿಗಳಿಗೆ ವಾಸಿಸಲು ಸಮಸ್ಯೆಯಾಗುತ್ತಿದೆ ಎಂದು ಹೇಳಿದರು. ಈ ಸಂಬಂಧ ಅಧ್ಯಕ್ಷರು ಮಾತನಾಡಿ ಥಿಯೇಟರ್‌ನ ಜಾಗದ ಬಗ್ಗೆ ಈಗಾಗಲೇ ನ್ಯಾಯಾಯಲದಲ್ಲಿ ದಾವೆ ಇರುವುದರಿಂದ ಸದರಿ ವಿಷಯದ ಬಗ್ಗೆ ಶೀಘ್ರವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಗೆ ಅಧ್ಯಕ್ಷರು ತಿಳಿಸಿದರು.

4. ಹೆಚ್. ಸಿದ್ದಯ್ಯ ರಸ್ತೆಯಲ್ಲಿ ನಿರ್ಮಾಣ ಹಂತದಲ್ಲಿರುವ ಕಟ್ಟಡದಲ್ಲಿ ಪಾರ್ಕಿಂಗ್ ವ್ಯವಸ್ಥೆ ಇಲ್ಲದೇ ಇರುವ ಬಗ್ಗೆ ಸಾರ್ವಜನಿಕರು ಪ್ರಸ್ತಾಪಿಸಿ ಕ್ರಮ ಕೈಗೊಳ್ಳಲು ಕೋರಿದರು. ಸದರಿ ವಿಷಯದ ಬಗ್ಗೆ ಇಂಜಿನಿಯರಿಂಗ್ ವಿಭಾಗದಿಂದ ಪರಿಶೀಲಿಸಲು ಸೂಚಿಸಲಾಯಿತು.

5. ವಾರ್ಡ್‌ನ ವ್ಯಾಪ್ತಿಯ ಅನೇಕ ರಸ್ತೆಗಳಲ್ಲಿ ಬೀದಿ ದೀಪಗಳು ಇಲ್ಲದೇ ಇರುವುದನ್ನು ಸಾರ್ವಜನಿಕರು ಪ್ರಸ್ತಾಪಿಸಿದರು. ಸದರಿ ವಿಷಯದ ಬಗ್ಗೆ ವಿದ್ಯುತ್ ಬಿಬಿಎಂಪಿ ವತಿಯಿಂದ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.



Scanned with CamScanner

6. ವಾರ್ಡಿನ ಆನೆ ಪಾರ್ಕ್‌ನಲ್ಲಿ ಬಂಬುಗಳನ್ನು ಕತ್ತರಿಸಿ ಪಾತ್‌ವೇನಲ್ಲಿ ಹಾಕಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿದ್ದು, ಸದರಿ ಬೊಂಬುಗಳನ್ನು ತೆರವುಗೊಳಿಸಲು ಕೋರಿದರು. ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲು ತೋಟಗಾರಿಕೆ ಇಲಾಖೆಯನ್ನು ಕೋರಲಾಯಿತು.

7. ವಾರ್ಡ್‌ನ ರಾಣಿಪಾರ್ಕ್ ಅನ್ನು ಸಾರ್ವಜನಿಕರ ಉಪಯೋಗಕ್ಕೆ ತೆರೆಯಲು ಕೋರಿದರು. ಸದರಿ ಪಾರ್ಕ್ ಈಗಾಗಲೇ ಸಾರ್ವಜನಿಕರ ಉಪಯೋಗಕ್ಕೆ ಯೋಗ್ಯವಾಗಿದ್ದು, ಸರ್ಕಾರದ ಶಿಷ್ಟಾಚಾರದಂತೆ ಸಾರ್ವಜನಿಕರ ಉಪಯೋಗಕ್ಕೆ ತೆರೆಯಲಾಗುವುದೆಂದು ಅಧ್ಯಕ್ಷರು ಸಭೆಗೆ ತಿಳಿಸಿದರು.

8. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಪ್ರತಿದಿನ ನೀರು ಸರಬರಾಜು ಆಗದೇ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ದೂರಿದರು. ಸದರಿ ವಿಷಯದ ಬಗ್ಗೆ BWSSB ಅಧಿಕಾರಿಗಳು ಕ್ರಮ ವಹಿಸಲು ಸೂಚಿಸಲಾಯಿತು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner